# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

**ಮಂಗಳವಾರ, ದಿನಾಂಕ: 13ನೇ ಜೂನ್, 2017**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ನೂತನ ಸದಸ್ಯರ ಪ್ರಮಾಣವಚನ ಸ್ವೀಕಾರ

### 02. ಪ್ರಶ್ನೋತ್ತರ

**ಅ.** ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೆಯ ಪಟ್ಟಿ

**ಆ.** **ತಡೆಹಿಡಿಯಲಾದ ಪ್ರಶ್ನೆ:**

ಹದಿನೈದನೆಯ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಆರ್. ಧರ್ಮಸೇನ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 218(2086) : **ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು**

**ಇ.** ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತನೆಯ ಪಟ್ಟಿ

### 03. ನಿರ್ಣಯ

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀಯುತ ವಿ.ಎಸ್. ಉಗ್ರಪ್ಪ, ಶರಣಪ್ಪ ಮಟ್ಟೂರ, ಕೆ.ಸಿ.ಕೊಂಡಯ್ಯ, ಕೆ. ಅಬ್ದುಲ್ ಜಬ್ಬಾರ್, ಎಂ.ಎ. ಗೋಪಾಲಸ್ವಾಮಿ, ಆರ್. ಪ್ರಸನ್ನ ಕುಮಾರ್ ಹಾಗೂ ಹೆಚ್.ಎಂ. ರೇವಣ್ಣ ಅವರುಗಳು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 165 ಹಾಗೂ ಭಾರತ ಸಂವಿಧಾನದ 183ನೇ ಅನುಚ್ಛೇದದ 'ಸಿ' ಖಂಡದಡಿಯಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಾದ ಶ್ರೀ ಡಿ.ಹೆಚ್.ಶಂಕರಮೂರ್ತಿ ಅವರನ್ನು ಸಭಾಪತಿ ಸ್ಥಾನದಿಂದ ತೆಗೆದುಹಾಕಬೇಕೆಂದು ನೀಡಿರುವ ನಿರ್ಣಯವನ್ನು ಮಂಡಿಸಲು ಸದನದ ಅನುಮತಿ ಕೋರುವುದು.

### 04. ವರದಿಗಳನ್ನೊಪ್ಪಿಸುವುದು

**ಶ್ರೀ ಮಾನೆ ಶ್ರೀನಿವಾಸ್** ಅವರು (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) 2016-17ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 20, 21 ಹಾಗೂ 22ನೇ ವರದಿಗಳನ್ನು ಒಪ್ಪಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯ

**ಶ್ರೀ ಕೆ.ಎಸ್. ಈಶ್ವರಪ್ಪ, ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಇತರರುಗಳಿಂದ** ರಾಜ್ಯದಲ್ಲಿ ಸತತ ಬರಗಾಲದಿಂದ ಉಂಟಾಗಿರುವ ಪರಿಸ್ಥಿತಿಯ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

## 06. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯಾದ್ಯಂತ ಲಕ್ಷಾಂತರ ಹೊಲಿಗೆ ವೃತ್ತಿ ಬಾಂಧವರಿಗೆ ಈಗಾಗಲೇ ಜಾರಿಯಲ್ಲಿರುವ 'ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ' ಮುಖಾಂತರ ಜಾರಿಯಲ್ಲಿರುವ ಭವಿಷ್ಯನಿಧಿ, ಪಿಂಚಣಿ ಮತ್ತು ಎನ್.ಪಿ.ಎಸ್. ಲೈಫ್ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ **ಮಾನ್ಯ ಕಾರ್ಮಿಕ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀಯುತರುಗಳಾದ: ಕೋಟ ಶ್ರೀನಿವಾಸ ಪೂಜಾರಿ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಎಂ.ಕೆ. ಪ್ರಾಣೇಶ್, ಭಾನುಪ್ರಕಾಶ್, ಆರ್. ಪ್ರಸನ್ನಕುಮಾರ್ ಹಾಗೂ ಇತರರುಗಳು** ಗ್ರಾಮ ಪಂಚಾಯತಿಗಳಲ್ಲಿನ ತೆರಿಗೆ ಬಾಕಿ, ಬಾಪೂಜಿ ಸೇವಾ ಕೇಂದ್ರಗಳನ್ನು ಶಕ್ತಿಯುತಗೊಳಿಸುವುದು, ಸಿಬ್ಬಂದಿಗಳ ವೇತನ ಹಾಗೂ ಪಿ.ಡಿ.ಓ.ಗಳ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವುದು ಇತ್ಯಾದಿ ವಿಷಯಗಳ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ವಿ.ಎಸ್.ಉಗ್ರಪ್ಪ** ಅವರು ಸರ್ಕಾರದ ಹಾಗೂ ಖಾಸಗಿಯವರಿಂದ ನಡೆಯುತ್ತಿರುವ ಘನತ್ಯಾಜ್ಯ ಸಂಸ್ಕರಣಾ ಘಟಕಗಳು ಹಾಗೂ ಅವುಗಳು ಸಂಸ್ಕರಣೆ ಮಾಡುತ್ತಿರುವ ಘನತ್ಯಾಜ್ಯದ ಪ್ರಮಾಣ ಹಾಗೂ ವಿಲೇವಾರಿಗಾಗಿ ಮೀಸಲಿಟ್ಟಿರುವ ಹಣದ ಕುರಿತು **ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರ** ಗಮನ ಸೆಳೆಯುವುದು.

## 07. ವಿಧಾನ ಮಂಡಲದ ಸಮಿತಿಯ ವರದಿಯ ಮೇಲೆ ಚರ್ಚೆ

**ಶ್ರೀಯುತರುಗಳಾದ: ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ), ಕೆ.ಸಿ. ಕೊಂಡಯ್ಯ ಹಾಗೂ ಅಲ್ಲಂ ವೀರಭದ್ರಪ್ಪ** ಅವರುಗಳು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2014-15ನೇ ಸಾಲಿನ ಮೂರನೇ ವರದಿಯಲ್ಲಿನ ಶಿಫಾರಸ್ಸುಗಳು ಹಾಗೂ ಅವುಗಳ ಮೇಲೆ ಸರ್ಕಾರ ಕೈಗೊಂಡಿರುವ ಅನುಸರಣಾ ವರದಿಯ ಬಗ್ಗೆ ಪ್ರಸ್ತಾಪಿಸುವುದು ಹಾಗೂ ಸರ್ಕಾರದಿಂದ ಉತ್ತರ.

**ಶ್ರೀನಿವಾಸ**
**ಕಾರ್ಯದರ್ಶಿ**

---